## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 593 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಡಾ|| ಉಮಾಶ್ರೀ (ನಾಮನಿರ್ದೇಶಿತರು) |
| ಉತ್ತರಿಸಬೇಕಾದ ದಿನಾಂಕ | : | 09.03.2026 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೇಂದ್ರ ಹಾಗೂ ರಾಜ್ಯ ಸರ್ಕಾರ ಗುರುತಿಸಿದ ಅನರ್ಹ ಪಡಿತರ ಚೀಟಿಗಳ ಪರಿಶೀಲನಾ ಕಾರ್ಯದಲ್ಲಿ ಎಷ್ಟು ಪಡಿತರ ಚೀಟಿಗಳನ್ನು ಅನರ್ಹ ಎಂದು ಗುರುತಿಸಲಾಗಿದೆ; | ಕೇಂದ್ರ ಹಾಗೂ ರಾಜ್ಯ ಸರ್ಕಾರ ಗುರುತಿಸಿದ ಅನರ್ಹ ಪಡಿತರ ಚೀಟಿಗಳ ಪರಿಶೀಲನಾ ಕಾರ್ಯದಲ್ಲಿ, ಈ ಕೆಳಗಿನಂತೆ ಅನರ್ಹ ಪಡಿತರ ಚೀಟಿಗಳನ್ನು ಗುರುತಿಸಲಾಗಿದೆ. |

| S.L No | KPI remarks | Total Count |
|---|---|---|
| 1 | CBDT Income Group Annual Income > 1,20,000 | 580415 |
| 2 | GSTN Gross Turnover >25 Lacs | 2695 |
| 3 | MCA Individual as Director | 21402 |
| 4 | PDS Duplicate RC Inter State | 73859 |
| 5 | PDS Duplicate RC Intra State | 430 |
| 6 | PDS RC Member Above 100 Years | 2050 |
| 7 | PDS Silent RC >12 Months | 40833 |
| 8 | PDS Silent RC 6-12 Months | 17414 |

<table>
<tr>
<td></td>
<td></td>
<td>
<table>
<tr><td>9</td><td>PDS Single Member Below 18 Years</td><td>793</td></tr>
<tr><td>10</td><td>PM KISAN Land Holding >7.5 Acres</td><td>34710</td></tr>
<tr><td>11</td><td>UIDAI Aadhaar Status Deceased</td><td>1452</td></tr>
<tr><td>12</td><td>Vehicle Ownership value Owning LIGHT MOTOR VEHICLE</td><td>151</td></tr>
<tr><td>13</td><td>Vehicle Ownership value Owning MEDIUM MOTOR VEHICLE</td><td>1</td></tr>
<tr><td>14</td><td>Vehicle Ownership value Owning OTHER THAN MENTIONED ABOVE</td><td>1</td></tr>
<tr><td></td><td>Total</td><td>7,76206</td></tr>
</table>
</td>
</tr>
<tr>
<td>ಆ</td>
<td>ಈ ಕಾರ್ಯದಲ್ಲಿನ ಸಾಕಷ್ಟು ಬಡ, ಮಧ್ಯಮ ವರ್ಗದ ಬಿಪಿಎಲ್ ಪಡಿತರ ಚೀಟಿ ರದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದುವರೆಗೂ ಎಷ್ಟು ನೈಜ ಬಿಪಿಎಲ್ ಕಾರ್ಡ್‌ಗಳನ್ನು ರದ್ದು ಮಾಡಲಾಗಿದೆ;</td>
<td>ಸರ್ಕಾರದ ಆದೇಶ ಸಂಖ್ಯೆ: ಇ-ಆನಾಸ 159 ಡಿಆರ್‌ಎ 2025 ದಿನಾಂಕ: 30.10.2025 ರಲ್ಲಿ ರಾಜ್ಯದಲ್ಲಿರುವ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಿ ಸದರಿ ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಲು ಹಾಗೂ ಈ ರೀತಿ ಪರಿವರ್ತಿಸಿದ ಪ್ರಮಾಣಕ್ಕೆ ಅನುಗುಣವಾಗಿ ಅಷ್ಟೇ ಪ್ರಮಾಣದ ಆದ್ಯತಾ ಪಡಿತರ ಚೀಟಿಗಳನ್ನು (PHH) ಬಡತನ ರೇಖೆಗಿಂತ ಕೆಳಗಿರುವ ಅರ್ಹ ನಾಗರಿಕರಿಗೆ ವಿತರಿಸಲು ಈ ಕೆಳಕಂಡಂತೆ ಕ್ರಮ ವಹಿಸಲು ಆದೇಶಿಸಲಾಗಿದೆ.<br><br>1. ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಂದಿರುವ ಅನರ್ಹ ಫಲಾನುಭವಿಗಳನ್ನು ಪತ್ತೆ ಹಚ್ಚಿ ಸದರಿಯವರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸತಕ್ಕದ್ದು.</td>
</tr>
</table>

| | | |
|---|---|---|
| | | 2. ಈ ರೀತಿ ತಾತ್ಕಾಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನಗಳೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರರಿಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸತಕ್ಕದ್ದು.<br><br>3. ಅನರ್ಹರು ಹೊಂದಿರುವ ಆದ್ಯತಾ ಪಡಿತರ ಚೀಟಿಗಳನ್ನು (PHH) ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಪರಿವರ್ತಿಸಿದ ನಂತರ ಯಾವುದೇ ಆಕ್ಷೇಪಣೆ ಸ್ವೀಕೃತವಾಗದೇ ಇದ್ದಲ್ಲಿ ಅಂತಹ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ (NPHH) ಮುಂದುವರೆಸತಕ್ಕದ್ದು.<br><br>4 ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಅನರ್ಹರನ್ನು ಪತ್ತೆ ಹಚ್ಚಿ, ಅವುಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ (NPHH) ಮಾರ್ಪಡಿಸಿದ ನಂತರ ಅಷ್ಟೇ ಸಂಖ್ಯೆಯ ಆದ್ಯತಾ ಪಡಿತರ ಚೀಟಿಗಳನ್ನು (PHH) ಹೊಸದಾಗಿ ಅರ್ಹ ಫಲಾನುಭವಿಗಳಿಗೆ ನೀಡಲು ಕ್ರಮವಹಿಸತಕ್ಕದ್ದು.<br><br>ಈ ರೀತಿ ತಾತ್ಕಲಿಕವಾಗಿ ಆದ್ಯತೇತರ ಪಡಿತರ ಚೀಟಿಯನ್ನಾಗಿ (NPHH) ಪರಿವರ್ತಿಸಲಾದ ಪಡಿತರ ಚೀಟಿದಾರರು ಆದ್ಯತಾ ಪಡಿತರ ಚೀಟಿ ಹೊಂದಲು (PHH) ಅರ್ಹರಾಗಿದ್ದಲ್ಲಿ 45 ದಿನದೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದಲ್ಲಿ ಸದರಿ ಮನವಿಯನ್ನು ಪರಿಶೀಲಿಸಿ ಆದ್ಯತಾ ಪಡಿತರ ಚೀಟಿ ಹೊಂದಲು ನಿಯಮಾನುಸಾರ ಅರ್ಹರಿದ್ದಲ್ಲಿ ಅಂತಹವರ ಆದ್ಯತಾ ಪಡಿತರ ಚೀಟಿಯನ್ನು (PHH) ಮರುಸ್ಥಾಪಿಸಲು ಕ್ರಮವಹಿಸಲಾಗುತ್ತದೆ. ಅದರಂತೆ ಒಂದು ವೇಳೆ ಅರ್ಹ ಫಲಾನುಭವಿಯ ಆದ್ಯತಾ ಪಡಿತರ ಚೀಟಿಯನ್ನು |

| | | |
|---|---|---|
| | | ರದ್ದುಪಡಿಸಿದಲ್ಲಿ, ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅದರನ್ವಯ ಸಂಬಂಧಪಟ್ಟ ತಾಲ್ಲೂಕಿನ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದ **15** ದಿನದೊಳಗೆ ಮನವಿಯನ್ನು ಪರಿಶೀಲಿಸಿ ಅರ್ಹರಿದ್ದಲ್ಲಿ, ನಿಯಮಾನುಸಾರ ಕ್ರಮವಹಿಸಲಾಗುತ್ತದೆ.<br>ದಿನಾಂಕ **01.09.2025** ರಿಂದ **22.06.2026** ರವರೆಗೆ ಒಟ್ಟು **4,09,676** ಅನರ್ಹ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿರುತ್ತದೆ. |
| ಇ | ಸರ್ಕಾರಿ ನೌಕರರು ಸಹ ಬಿಪಿಎಲ್ ಪಡಿತರ ಚೀಟಿಯನ್ನು ಪಡೆದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ. ಅಂತಹವರ ವಿರುದ್ಧ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಬಂದಿರುತ್ತದೆ.<br>ದಿನಾಂಕ **30.01.2021** ರಿಂದ **31.10.2025** ರ ವರೆಗೆ **19,685** ಸರ್ಕಾರಿ ನೌಕರರು ಆದ್ಯತಾ ಪಡಿತರ ಚೀಟಿಗಳನ್ನು ಹೊಂದಿರುವ ಬಗ್ಗೆ ಪತ್ತೆ ಹಚ್ಚಿ ಅಂತಹ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲಾಗಿರುತ್ತದೆ ಹಾಗೂ ಅವರಿಂದ ದಂಡ ವಸೂಲಾತಿಗೆ ಕ್ರಮವಹಿಸಲಾಗಿರುತ್ತದೆ. |

ಇ-ಆನಾಸ **62** ಡಿಆರ್‌ಎ **2026**

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು